# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

### ವಾರ್ಡ್ ನಂ.71 :ಹೆಗ್ಗನಹಳ್ಳಿ

**ದಿನಾಂಕ: 21.05.2022 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀ ಬಿ.ಆರ್.ರವಿಕುಮಾರ್, ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

ಸಭೆಯಲ್ಲಿ ಹಾಜರಿದ್ದವರು:

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್.ರವಿಕುಮಾರ್ | ನೋಡಲ್ ಅಧಿಕಾರಿ-ವಾರ್ಡ್ ನಂ.71 |
| 2 | ಜಯಂತ್‌ಕುಮಾರ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು-ವಾರ್ಡ್ 71 |
| 3 | ವೆಂಕಟರಾಜು | ಸದಸ್ಯರು |
| 4 | ನಿಂಗಪ್ಪ | ಸದಸ್ಯರು |
| 5 | ಕೆ ಎ ಉಮೇಶ | ಸದಸ್ಯರು |
| 6 | ಮಂಜುನಾಥ್ ಎ | ಸದಸ್ಯರು |
| 7 | ಮುನಿರಾಜು ಹೆಚ್ ಟಿ | ಸದಸ್ಯರು |
| 8 | ಕೆ ಎಲ್ ಮುರುಳೀಧರ್ | ಕಂದಾಯ ಪರಿವೀಕ್ಷಕರು |
| 9 | ರಾಮಣ್ಣ, | ಹಿರಿಯಆರೋಗ್ಯ ಪರಿವೀಕ್ಷಕರು |

**:ನಡಾವಳಿಯ ವರದಿ:**

- ಕಾರ್ಯದರ್ಶಿಗಳಾದ ಶ್ರೀ ಜಯಂತ್‌ಕುಮಾರ್ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

ವಿಷಯ ಸಂಖ್ಯೆ:1 :- ಮಳೆಯಿಂದ ಹಾನಿಗೊಳಗಾದವರಿಗೆ ಪರಿಹಾರ ನೀಡುವ ಬಗ್ಗೆ

ಕಂದಾಯ ವಸೂಲಿಗಾರರಾದ ಕೆ ಎಲ್ ಮುರುಳೀಧರ್ ರವರು ಮಾತನಾಡಿ ಇತ್ತೀಚೆಗೆ ಸುರಿ ಭಾರಿ ಮಳೆಯಿಂದ ಹಾನಿಗೊಳಗಾದ ಫಲಾನುಭವಿಗಳ ಅರ್ಜಿಗಳನ್ನು ಪರಿಶೀಲಿಸಿದ್ದು, ಸದರಿಯವರಿಗೆ ಪರಿಹಾರ ಕೊಡಿಸುವ ಸಂಬಂಧ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ವಿಷಯ ಸಂಖ್ಯೆ: 2:-BBMP SAHAYA APP:

- ಜಯಂತ್‌ಕುಮಾರ್, ಸಹಾಯಕ ಅಭಿಯಂತರರು, ವಾರ್ಡ್ ನಂ.71 ಮಾತನಾಡಿ ನಮ್ಮ ಇಲಾಖೆಗೆ ಸಂಬಂಧಪಟ್ಟ ದೂರುಗಳಿಗೆ ಶೀಘ್ರಗತಿಯಲ್ಲಿ ಪರಿಹಾರಕ್ರಮ ಕೈಗೊಳ್ಳುತ್ತಿದ್ದು, ಯಾವುದೇ ಸಮಸ್ಯೆಗಳು ಬಾಕಿ ಇರುವುದಿಲ್ಲ ಎಂದು ತಿಳಿಸಿದರು.

- ರಾಮಣ್ಣ, ಹಿರಿಯಆರೋಗ್ಯ ಪರಿವೀಕ್ಷಕರು, ಮಾತನಾಡಿ ಘನ ತ್ಯಾಜ್ಯ ನಿರ್ವಹಣೆಗೆ ಸಂಬಂಧಪಟ್ಟ ದೂರುಗಳನ್ನು ಪರಿಹರಿಸಲಾಗಿದೆ ಹಾಗೂ ಯಾವುದೇಸಮಸ್ಯೆಬಾಕಿ ಇರುವುದಿಲ್ಲ ಎಂದು ತಿಳಿಸಿದರು.

ವಿಷಯ ಸಂಖ್ಯೆ: 3:-ರಸ್ತೆಗುಂಡಿಗಳ ಬಗ್ಗೆ

ಇತ್ತೀಚೆಗೆ ಸುರಿದ ಮಳೆಯಿಂದಾಗೀ ರಸ್ತೆಗಳಲ್ಲಿ ಗುಂಡಿಗಳು ಹೆಚ್ಚಾಗಿದ್ದು, ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

ಇದಕ್ಕೆ ಸಹಾಯಕ ಅಭಿಯಂತರರು ಮಾತನಾಡಿ, ವಾರ್ಡ್ 71 ರ ವ್ಯಾಪ್ತಿಯ ರಸ್ತೆಗಳಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ಪಾಲಿಕೆಯ Fix My Street App ನ್ನಲ್ಲಿ ಪ್ರತಿಯೊಂದು ರಸ್ತೆಗುಂಡಿಯ ಚಿತ್ರಸಹಿತ ವಿವರಗಳನ್ನು ದಾಖಲಿಸಿದ್ದು, ಶೀಘ್ರದಲ್ಲಿಯೇ ಬಿದ್ದಿರುವ ರಸ್ತೆಗುಂಡಿಗಳನ್ನು ಮುಚ್ಚಿಸಲಾಗುವುದುಎಂದು ತಿಳಿಸಿದರು.

- ವಿಷಯ ಸಂಖ್ಯೆ: 4:-ಉದ್ಯಾನವನಗಳಲ್ಲಿನ ವಿದ್ಯುತ್ ದೀಪಗಳನ್ನು ಅಳವಡಿಸುವ ಬಗ್ಗೆ

ಸದಸ್ಯರಾದ ವೆಂಕಟರಾಜುರವರು ಪತ್ರವನ್ನು ನೀಡಿ, ವಾರ್ಡ್ ನಂ.71ರ ವ್ಯಾಪ್ತಿಯಲ್ಲಿರುವ ಉದ್ಯಾನವನಗಳಲ್ಲಿ ಹಲವು ಬಾರಿ ಮೌಖಿಕವಾಗಿ ಕೋರಿದ್ದರೂ ಸಹ ವಿದ್ಯುತ್ ದೀಪಗಳನ್ನು ಅಳವಡಿಸಿರುವುದಿಲ್ಲ, 2022-23ರ ಬಜೆಟ್ ನ್ನಲ್ಲಿ ಈ ಸಂಬಂಧ ಅನುದಾನವನ್ನು ಕಾದಿರಿಸಬೇಕೆಂದು ಕೋರಿದರು.

ಇದಕ್ಕೆ ನೋಡಲ್ ಅಧಿಕಾರಿರವರು ಮಾತನಾಡಿ, ಉದ್ಯಾನವನಗಳಲ್ಲಿ ನಿರ್ವಹಣೆಯನ್ನು ಯೋಜನಾ ವಿಭಾಗ, ದಾಸರಹಳ್ಳಿ ರವರು ನಿರ್ವಹಿಸುತ್ತಿದ್ದು, ಈ ವಿಷಯವನ್ನು ಸದರಿಯವರ ಗಮನಕ್ಕೆ ತಂದು ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು.

ಕೊನೆಯದಾಗಿ ಮಾನ್ಯ ನೋಡಲ್ಅಧಿಕಾರಿರವರುಸಭೆಗೆ ಹಾಜರಾದಎಲ್ಲಾಅಧಿಕಾರಿ/ನೌಕರರಿಗೆಮತ್ತು ಸದಸ್ಯರಿಗೆವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.71ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಜಯಂತ್ ಕುಮಾರ್ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ 71, ಹೆಗ್ಗನಹಳ್ಳಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ
ವಾರ್ಡ್ ನಂ.71, ಹೆಗ್ಗನಹಳ್ಳಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.71 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ